ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಡಿಟಿಇ/9/ಇಎಸ್‌ಟಿ(1)ಎ/2019-20 /431

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 02.09.2020

**ಹಿಂಬರಹ**

ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 116 ಡಿಟಿಇ 2019 ದಿನಾಂಕ: 26-08-2020 ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಆಡಳಿತಾಧಿಕಾರಿ ವೃಂದದ ದಿನಾಂಕ: 16.05.2019 ರಲ್ಲಿದ್ದಂತೆ ಪರಿಷ್ಕೃತ ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದೆ. ಸದರಿ ಸರ್ಕಾರದ ಅಧಿಸೂಚನೆಯನ್ನು ಸಂಬಂಧಪಟ್ಟವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

**ಜಂಟಿ ನಿರ್ದೇಶಕರು(ಆಡಳಿತ),**
**ತಾಂತ್ರಿಕ ಶಿಕ್ಷಣ ಇಲಾಖೆ,**
**ಬೆಂಗಳೂರು.**

ಪ್ರತಿ-

1. ಪ್ರಧಾನ ಮಹಾಲೇಖಪಾಲರು(ಎ&ಯು)(ಎ&ಇ) 1&2, ಕರ್ನಾಟಕ, ಬೆಂಗಳೂರು
2. ತಾಂತ್ರಿಕ ಶಿಕ್ಷಣ ಇಲಾಖೆಯ ಸಂಬಂಧಪಟ್ಟ ಎಲ್ಲಾ ಪ್ರಾಂಶುಪಾಲರುಗಳಿಗೆ / ಅಧಿಕಾರಿಗಳಿಗೆ;
3. ತಾಂತ್ರಿಕ ಶಿಕ್ಷಣ ಇಲಾಖೆಯ ಸಂಬಂಧಪಟ್ಟ ಆಡಳಿತಾಧಿಕಾರಿಗಳಿಗೆ;
4. ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ(ತಾಂತ್ರಿಕ ಶಿಕ್ಷಣ); ಬಹುಮಹಡಿ ಕಟ್ಟಡ, ಬೆಂಗಳೂರು;.
5. ನೋಡಲ್ ಅಧಿಕಾರಿ, ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು(**ವೆಬ್‌ಸೈಟ್‌ನಲ್ಲಿ ಅಳವಡಿಸಲು**);
6. ಕಛೇರಿ ಪ್ರತಿ.

# ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 116 ಡಿಟಿಇ 2019.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ, 2ನೇ ಗೇಟ್, 6ನೇ ಮಹಡಿ,
ಬೆಂಗಳೂರು, ದಿನಾಂಕ: 26.08.2020

JD-ADMIN [EST-1A]

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಆಪ್ತ ಶಾಖೆ.
ಸಂಖ್ಯೆ 523
ದಿನಾಂಕ 27-08-2020

EST(1)A
28/8/2020

## ಅಧಿಸೂಚನೆ

ವಿಷಯ: ತಾಂತ್ರಿಕ ಶಿಕ್ಷಣ ಇಲಾಖೆಯ ಆಡಳಿತಾಧಿಕಾರಿ ವೃಂದದ ಪರಿಷ್ಕೃತ ಅಂತಿಮ ಜೇಷ್ಠತಾ ಪಟ್ಟಿಯನ್ನು (ದಿ: 16.05.2019 ರಲ್ಲಿದ್ದಂತೆ) ಪ್ರಕಟಿಸುವ ಬಗ್ಗೆ.

ಉಲ್ಲೇಖ:
(1) ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 182 ಎಸ್‌ಆರ್‌ಆರ್ 2011, ದಿನಾಂಕ:06-05-2017
(2) ಸರ್ಕಾರದ ಅಧಿಸೂಚನೆ ಸಂ:ಇಡಿ 203 ಡಿಟಿಇ 2017, ದಿನಾಂಕ:11-01-2018
(3)ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 186 ಎಸ್‌ಆರ್‌ಎಸ್ 2018, ದಿನಾಂಕ:27-2-2019
(4) ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 186 ಎಸ್‌ಆರ್‌ಎಸ್ 2018, ದಿನಾಂಕ:15-5-2019
(5) ಇದೇ ಸಮ ಸಂಖ್ಯೆ ಅಧಿಸೂಚನೆ ದಿನಾಂಕ: 14.05.2020

>>>><<<<

1. ಶ್ರೀ ಬಿ.ಕೆ. ಪವಿತ್ರ ಮತ್ತು ಇತರರು ವಿರುದ್ಧ ಯೂನಿಯನ್ ಆಫ್ ಇಂಡಿಯಾ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲ್ ಸಂಖ್ಯೆ:2368/2011 ಮತ್ತು ಇತರ ಸಿವಿಲ್ ಅಪೀಲುಗಳಲ್ಲಿ ದಿನಾಂಕ:09-02-2017 ರಂದು ನೀಡಿರುವ ತೀರ್ಪಿನಲ್ಲಿ ಕರ್ನಾಟಕ (ರಾಜ್ಯದ ಸಿವಿಲ್ ಸೇವೆಗಳಲ್ಲಿಯ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿದ ಸರ್ಕಾರಿ ನೌಕರರ ಜೇಷ್ಠತೆಯ ನಿರ್ಧಾರಣಾ ಅಧಿನಿಯಮ, 2002ರ ಪ್ರಕರಣ 3 ಮತ್ತು 4ನ್ನು ಸಂವಿಧಾನದ ಅನುಚ್ಛೇದ-14 ಮತ್ತು 16 ಕ್ಕೆ ಅಧಿಕಾರಾತೀತ (Ultra-vires Articles 14 and 16 of the constitution) ಎಂದು ಆದೇಶಿಸಿರುತ್ತದೆ.

2. ಈ ಹಿನ್ನೆಲೆಯಲ್ಲಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾ ನಿಯಮಗಳು) ವಿಭಾಗವು ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 182 ಎಸ್‌ಆರ್‌ಆರ್ 2011, ದಿನಾಂಕ:06-05-2017ರಲ್ಲಿ ನೀಡಿರುವ ಮಾರ್ಗಸೂಚಿಗಳನುಸಾರ ಮುಂಬಡ್ತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನೌಕರರಿಗೆ ಮೀಸಲಾತಿ ಅನುಸರಿಸಿರುವ ಎಲ್ಲಾ ವೃಂದಗಳ ಜೇಷ್ಠತಾ ಪಟ್ಟಿಗಳನ್ನು ಪರಿಷ್ಕರಿಸಲು ಆದೇಶಿಸಿರುತ್ತದೆ.

3. ಅಂತೆಯೇ, ಉಲ್ಲೇಖ (1) ರಲ್ಲಿನ ದಿನಾಂಕ:06-05-2017ರ ಸರ್ಕಾರದ ಆದೇಶದಲ್ಲಿ ನೀಡಿರುವ ಮಾರ್ಗಸೂಚಿಗಳನುಸಾರ ಮುಂಬಡ್ತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನೌಕರರಿಗೆ ಮೀಸಲಾತಿ ಅನುಸರಿಸಿರುವ ಈ ವೃಂದದ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಿ, ಅಂತಿಮ ಜೇಷ್ಠತಾ ಪಟ್ಟಿಯನ್ನು ಮೇಲೆ ಉಲ್ಲೇಖ(2)ರ ಅಧಿಸೂಚನೆಯಲ್ಲಿ ದಿನಾಂಕ:11-01-2018ರಂದು ಹೊರಡಿಸಲಾಗಿದೆ.

DTE (JD-PS) No : 32
Date : 27/08/2020
Comp No : ............ ........ ....

...2

4. ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲು ಸಂಖ್ಯೆ 2368/2011 ಶ್ರೀ ಬಿ.ಕೆ.ಪವಿತ್ರ ಮತ್ತು ಇತರರು ವಿರುದ್ಧ ಕೇಂದ್ರ ಸರ್ಕಾರ ಮತ್ತು ಇತರರು ಮತ್ತು ಸಂಬಂಧಿಸಿದ ರಿವ್ಯೂ ಅರ್ಜಿ ಹಾಗೂ ರಿಟ್ ಅರ್ಜಿಗಳಲ್ಲಿನ ಪ್ರಕರಣ ಎಂ.ಎ ಸಂಖ್ಯೆ: 1151/2018 ರಲ್ಲಿ ದಿನಾಂಕ: 10.05.2019 ರಂದು ನೀಡಿದ ತೀರ್ಪಿನಲ್ಲಿ ಕರ್ನಾಟಕ ರಾಜ್ಯ ಪತ್ರದಲ್ಲಿ ದಿನಾಂಕ: 23.06.2018 ರಂದು ಪ್ರಕಟಿಸಲಾದ ಕರ್ನಾಟಕ(ರಾಜ್ಯದ ಸಿವಿಲ್ ಸೇವೆಯಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆದಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮದ ಜೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ 2017ರ ಸಂವಿಧಾನಿಕ ಸಿಂಧುತ್ವವನ್ನು ಎತ್ತಿ ಹಿಡಿದಿರುವುದರಿಂದ 2017ರ ಅಧಿನಿಯಮದನ್ವಯ ಕ್ರಮ ತೆಗೆದುಕೊಳ್ಳುವ ಬಗ್ಗೆ ಉಲ್ಲೇಖ(3) ಮತ್ತು (4)ರ ಸರ್ಕಾರದ ಆದೇಶಗಳಲ್ಲಿ ಸೂಚನೆಗಳನ್ನು ನೀಡಲಾಗಿರುತ್ತದೆ.

5. 2017ರ ಅಧಿನಿಯಮದ ಸೆಕ್ಷನ್ 4ರಲ್ಲಿ "ಈ ಅಧಿನಿಯಮದಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರೇ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ, ಮೀಸಲಾತಿ ಆದೇಶದಲ್ಲಿ ಉಪಬಂದಿಸಲಾದಂತೆ ಬಡ್ತಿಯಲ್ಲಿ ಮೀಸಲಾತಿ ಆದೇಶದ ನೀತಿಗನುಸಾರವಾಗಿ 1978ರ ಏಪ್ರಿಲ್ 27ನೇ ದಿನಾಂಕದಿಂದ ಜಾರಿಗೆ ಬರುವಂತೆ ಬಡ್ತಿಹೊಂದಿದ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಸರ್ಕಾರಿ ನೌಕರರಿಗೆ ಈಗಾಗಲೇ ನೀಡಲಾಗಿರುವ ತತ್ಪರಿಣಾಮ ಜೇಷ್ಠತೆಯು ಸಿಂಧುವಾಗಿರತಕ್ಕದ್ದು ಮತ್ತು ಅದನ್ನು ಸಂರಕ್ಷಿಸತಕ್ಕದ್ದು ಹಾಗೂ ಅದನ್ನು ಭಂಗಗೊಳಿಸತಕ್ಕದ್ದಲ್ಲ" ಎಂದು ತಿಳಿಸಿದೆ.

6. ಈ ಹಿನ್ನೆಲೆಯಲ್ಲಿ ಉಲ್ಲೇಖ(4)ರ ಆದೇಶದಲ್ಲಿ, ಉಲ್ಲೇಖ(3)ರ ಆದೇಶದ ಕಂಡಿಕೆ 8 ರ ಉಪಕಂಡಿಕೆ (2)ರಲ್ಲಿ ಉಲ್ಲೇಖಿಸಲಾದ, ಕರ್ನಾಟಕ ರಾಜ್ಯ ಸಿವಿಲ್ ಸೇವಾ (ಮುಂಬಡ್ತಿ ವೇತನ ಮತ್ತು ಪಿಂಚಣಿಗಳ ಕ್ರಮಬದ್ಧತೆ) ಅಧಿನಿಯಮ, 1973ರ ಸೆಕ್ಷನ್ 4,5 ಮತ್ತು 6 ಅನ್ನು ಸೆಕ್ಷನ್ 9 ರೊಡನೆ ಸಹವಾಚನ ಮಾಡಿಕೊಂಡು, ಇವುಗಳನ್ವಯ ತಾತ್ಕಾಲಿಕ/ಅಂತಿಮ ಜೇಷ್ಠತಾ ಪಟ್ಟಿಯನ್ನು ತಯಾರಿಸಿ ಪ್ರಕಟಿಸುವ, ಅರ್ಹತಾ ದಿನಾಂಕವನ್ನು ನಿಗಧಿಪಡಿಸುವ, ಮುಂಬಡ್ತಿಗಳನ್ನು ಪುನರಾವಲೋಕನೆ ಮಾಡುವ, ವೇತನ ಮತ್ತು ಪಿಂಚಣಿಗಳನ್ನು ನಿಗಧಿಪಡಿಸುವುದನ್ನು ಒಳಗೊಂಡ ಪ್ರಕ್ರಿಯೆಯನ್ನು ಗರಿಷ್ಠ 30 ದಿನಗಳೊಳಗಾಗಿ ಪೂರ್ಣಗೊಳಿಸತಕ್ಕದ್ದು ಎಂದು ತಿಳಿಸಿದೆ.

7. ಅದರಂತೆ, ಉಲ್ಲೇಖ(2)ರ ಅಧಿಸೂಚನೆಯಲ್ಲಿ ದಿನಾಂಕ: 11.01.2018ರಂದು ಹೊರಡಿಸಿರುವ ತಾಂತ್ರಿಕ ಶಿಕ್ಷಣ ಇಲಾಖೆಯ ಆಡಳಿತಾಧಿಕಾರಿ ವೃಂದದ ಪರಿಷ್ಕೃತ ಜೇಷ್ಠತಾ ಪಟ್ಟಿಯನ್ನು ಉಲ್ಲೇಖ(3) ಮತ್ತು (4)ರ ಸರ್ಕಾರದ ಆದೇಶಗಳ ಹಿನ್ನೆಲೆಯಲ್ಲಿ ಪುನರಾವಲೋಕಿಸಿ ಪರಿಷ್ಕರಿಸಲಾಗಿದೆ.

8. ಹಾಗಾಗಿ, ತಾಂತ್ರಿಕ ಶಿಕ್ಷಣ ಇಲಾಖೆಯ ಆಡಳಿತಾಧಿಕಾರಿ ವೃಂದದ ಜೇಷ್ಟತಾ ಪಟ್ಟಿಯನ್ನು ಕರ್ನಾಟಕ ರಾಜ್ಯದ (ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸಕಾರಿ ನೌಕರರಿಗೆ ತತ್ಪರಿಣಾಮದ ಜೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ, 2017ರ ಪ್ರಕರಣ 3 ಮತ್ತು 4ನ್ನು ಅದರ ಪ್ರಕರಣ 5ರೊಂದಿಗೆ ಸಹವಾಚನ ಮಾಡಿಕೊಂಡಂತೆ ದಿನಾಂಕ:27.04.1978ರಿಂದ ಮೀಸಲಾತಿಯನ್ವಯ ನೀಡಲಾದ ಪದೋನ್ನತಿಗಳನ್ನು ನಿರ್ಧರಿಸಲಾಗಿದೆ. ಹಾಗಾಗಿ, ಸದರಿ ಜೇಷ್ಠತಾ ಪಟ್ಟಿಗಳಲ್ಲಿ ನೀಡಲಾಗಿದ್ದ ದಿನಾಂಕಗಳು ಸಿಂಧುವಾಗಿವೆ.

9. ಆದ್ದರಿಂದ ಉಲ್ಲೇಖ(3) ಮತ್ತು (4)ರ ಆದೇಶಗಳಲ್ಲಿನ ಸೂಚನೆಗಳನುಸಾರ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಆಡಳಿತಾಧಿಕಾರಿ ವೃಂದದ ಜೇಷ್ಟತಾ ಪಟ್ಟಿಯನ್ನು ಪುನರಾವಲೋಕಿಸಿ, ದಿನಾಂಕ:16-05-2019ರಲ್ಲಿದ್ದಂತೆ, ಉಲ್ಲೇಖ(5)ರಲ್ಲಿ ಪರಿಷ್ಕೃತ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿ ಈ ಬಗ್ಗೆ ಆಕ್ಷೇಪಣೆ/ಸಲಹೆಗಳನ್ನು ಸಲ್ಲಿಸಲು 15 ದಿನಗಳ ಕಾಲಾವಕಾಶವನ್ನು ನೀಡಲಾಗಿತ್ತು.

...3

10. ಅದರಂತೆ, ಸ್ವೀಕೃತವಾದ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಲಾಗಿದೆ. ಆಕ್ಷೇಪಣೆಗಳಲ್ಲಿನ ಅಂಶಗಳ ಪರಿಗಣನೆ ಬಗ್ಗೆ ಹಾಗೂ ತಿರಸ್ಕೃತ ಆಕ್ಷೇಪಣೆಗಳಿಗೆ ಸ್ಪಷ್ಟೀಕರಣ/ಷರಾವನ್ನು ಅನುಬಂಧ-2ರಲ್ಲಿ ನೀಡಲಾಗಿದೆ.

11. ದಿನಾಂಕ:16-05-2019ರಲ್ಲಿದ್ದಂತೆ ತಾಂತ್ರಿಕ ಶಿಕ್ಷಣ ಇಲಾಖೆಯ ಆಡಳಿತಾಧಿಕಾರಿ ವೃಂದದ ಅಂತಿಮ ಜೇಷ್ಠತಾ ಪಟ್ಟಿಯನ್ನು ಅನುಬಂಧ-1ರಲ್ಲಿ ಇರುವಂತೆ ಇದರೊಂದಿಗೆ ಲಗತ್ತಿಸಿ ಪ್ರಕಟಿಸಲಾಗಿದೆ.

**ಷರಾ:** ಈ ಹಿಂದೆ ಪ್ರಕಟಿಸಲಾಗಿದ್ದ ತಾಂತ್ರಿಕ ಶಿಕ್ಷಣ ಇಲಾಖೆಯ ಆಡಳಿತಾಧಿಕಾರಿ ವೃಂದದ ಅಂತಿಮ ಜೇಷ್ಠತಾ ಪಟ್ಟಿಗಳು ಚಾಲ್ತಿಯಲ್ಲಿರುವುದಿಲ್ಲ ಹಾಗೂ ಅವುಗಳನ್ನು ಯಾವುದೇ ಸೇವಾ ಸೌಲಭ್ಯಗಳಿಗೆ ಪರಿಗಣಿಸುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ,
ಮತ್ತು ಅವರ ಹೆಸರಿನಲ್ಲಿ

26/08/2020

**(ಎಂ.ಜಿ ವೆಂಕಟೇಶಯ್ಯ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).

ಪ್ರತಿ: ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ವಿಕಾಸಸೌಧ ಘಟಕ, ಬೆಂಗಳೂರು:- ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಮತ್ತು 100 ಪ್ರತಿಗಳನ್ನು ಸರಬರಾಜು ಮಾಡಲು.

ಇವರಿಗೆ,

1) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ವಿಧಾನ ಸೌಧ, ಬೆಂಗಳೂರು.
3) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
4) ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳಿಗೆ (ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇವರ ಮೂಲಕ)
5) ತಾಂತ್ರಿಕ ಶಿಕ್ಷಣ ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು (ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ)
6) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು/ಓಡಿಜಿಸಿ.

Website: www.karnataka.gov.in -> Status of Government Notification (Education Higher Department)

**ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 116 ಡಿಟಿಇ 2019, ದಿನಾಂಕ: 26.08.2020ಕ್ಕೆ ಅನುಬಂಧ-1**

**ಕರ್ನಾಟಕ (ರಾಜ್ಯದ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮವಾದ ಜೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ-2017, ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 186/ಎಸ್‌ಆರ್‌ಎಸ್/2018, ದಿ:27.02.2019 ಹಾಗೂ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 186/ಎಸ್‌ಆರ್‌ಎಸ್/2018, ದಿ:15.05.2019 ರಂತೆ ತಯಾರಿಸಲಾದ ತಾಂತ್ರಿಕ ಶಿಕ್ಷಣ ಇಲಾಖೆಯ ಗ್ರೂಪ್-ಎ ಸಮೂಹದ ಆಡಳಿತಾಧಿಕಾರಿ ವೃಂದದ ದಿನಾಂಕ: 21.08.1981 ರಿಂದ 15.05.2019 ರವರೆಗಿನ ದಿನಾಂಕ:16.05.2019 ರಲ್ಲಿದ್ದಂತೆ ಅಂತಿಮ ಜೇಷ್ಠತಾ ಪಟ್ಟಿ**

| ಕ್ರಮ ಸಂಖ್ಯೆ | ಹೆಸರು ಶ್ರೀ/ಶ್ರೀಮತಿ | ಮೀಸಲಾತಿ ಪ್ರವರ್ಗ | ನೇರ ನೇಮಕಾತಿ / ಮುಂಬಡ್ತಿ / ಇತರೆ | ಜನ್ಮ ದಿನಾಂಕ | ಸೇವೆಗೆ ಸೇರಿದ ದಿನಾಂಕ | ಸಹಾಯಕ ಆಡಳಿತಾಧಿಕಾರಿ ಹುದ್ದೆಗೆ ಮುಂಬಡ್ತಿ ದಿನಾಂಕ | ಆಡಳಿತಾಧಿಕಾರಿ ಹುದ್ದೆಗೆ | | ಷರಾ |
|---|---|---|---|---|---|---|---|---|---|
| | | | | | | | ನೈಜವಾಗಿ ಮುಂಬಡ್ತಿ / ಕಾರ್ಯವರದಿ ದಿನಾಂಕ | ಅರ್ಹತಾ ದಿನಾಂಕ | |
| 1 | 2 | 3 | 4 | 5 | 6 | 7 | 8 | 9 | 10 |
| 1. | ಎನ್.ಪುಟ್ಟಲಿಂಗಪ್ಪ | | ಮುಂಬಡ್ತಿ | 10-01-1930 | 02-11-1955 | - | 21-08-1981 | 21-08-1981 | ದಿ: 31.01.1988 ನಿವೃತ್ತಿ |
| 2. | ಕೆ.ರಾಮನಾಥರಾವ್ | | ಮುಂಬಡ್ತಿ | 08-11-1931 | 27-04-1951 | 26-11-1983 | 01-02-1988 | 01-02-1988 | ದಿ: 30.11.1989 ನಿವೃತ್ತಿ |
| 3. | ಎಂ.ಕೃಷ್ಣಮೂರ್ತಿ | | ಮುಂಬಡ್ತಿ | 18-05-1938 | 16-01-1959 | 01-04-1990 | 22-01-1991 | 22-01-1991 | ದಿ: 31.05.1996 ನಿವೃತ್ತಿ |
| 4. | ಎಸ್.ಆರ್.ಸರೋಜ | ಪ.ಪಂ. | ಮುಂಬಡ್ತಿ | 01-01-1941 | 21-04-1966 | 03-12-1993 | 31-01-1996 | 31-01-1996 | ದಿ: 31.12.1998 ನಿವೃತ್ತಿ |
| 5. | ಎಲ್.ಆಂಜನಪ್ಪ | ಪ.ಜಾ. | ಮುಂಬಡ್ತಿ | 12-07-1940 | 19-08-1959 | 06-01-1995 | 31-07-1998 | 31-07-1998 | ದಿ: 31.07.1998 ನಿವೃತ್ತಿ |
| 6. | ಪಿ.ಬಸವಣ್ಣ | | ಮುಂಬಡ್ತಿ | 20-05-1942 | 21-04-1966 | 02-08-1996 | 03-08-1998 | 03-08-1998 | ದಿ: 31.05.2000 ನಿವೃತ್ತಿ |
| 7. | ಬಿ.ಜೀವನ್ | ಪ.ಜಾ | ಮುಂಬಡ್ತಿ | 05-10-1947 | 16-03-1970 | 18-10-1996 | 01-02-2000 | 01-02-2000 | ದಿ: 31.10.2005 ನಿವೃತ್ತಿ |
| 8. | ಎಸ್.ರಾಘವೇಂದ್ರ | | ಮುಂಬಡ್ತಿ | 01-09-1948 | 24-12-1969 | 17-07-1997 | 26-04-2006 | 26-04-2006 | ದಿ: 31.08.2006 ನಿವೃತ್ತಿ |
| 9. | ಹೆಚ್.ವಾಜಂತ್ರಿ | ಪ.ಜಾ | ಮುಂಬಡ್ತಿ | 01-06-1950 | 11-02-1977 | 05-05-2003 | 14-05-2008 | 14-05-2008 | ದಿ: 31.05.2008 ನಿವೃತ್ತಿ |
| 10. | ಬಿ.ವೆಂಕಟಸ್ವಾಮಿ | ಪ.ಜಾ | ಮುಂಬಡ್ತಿ | 04-05-1953 | 03-05-1978 | 04-07-2008 | 20-08-2010 | 20-08-2010 | ದಿ: 31.05.2013 ನಿವೃತ್ತಿ |
| 11. | ಜಿ.ಎಸ್.ಭರ್ಮಪ್ಪ | ಪ.ಪಂ. | ಮುಂಬಡ್ತಿ | 01-06-1956 | 27-06-1985 | 12-08-2010 | 26-05-2016 | 26-05-2016 | ದಿ: 31.05.2016 ನಿವೃತ್ತಿ ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವ್ಯಕ್ತಿ |

26/08/2020

(ಎಂ.ಜಿ ವೆಂಕಟೇಶಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)

**ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 116 ಡಿಟಿಇ 2019, ದಿನಾಂಕ:26-08-2020ಕ್ಕೆ ಅನುಬಂಧ-2**

| ಕ್ರಸಂ. | ಆಕ್ಷೇಪಣೆ ಸಲ್ಲಿಸಿದ ಅಧಿಕಾರಿಯವರ ವಿವರ ಶ್ರೀಯುತರು | ಆಕ್ಷೇಪಣೆ ಸಲ್ಲಿಸಿದ ದಿನಾಂಕ | ಆಕ್ಷೇಪಣೆಯ ಸಂಕ್ಷಿಪ್ತ ವಿವರ | ಸರ್ಕಾರದಿಂದ ಪರಿಗಣನೆ |
|---|---|---|---|---|
| 01 | ಬಿ.ಕೆ.ರಾಠೋಡ್, ಆಡಳಿತಾಧಿಕಾರಿ (ನಿವೃತ್ತ) ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು | 20.05.2020 | ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ/30/ಡಿಟಿಇ/2020, ದಿನಾಂಕ:29.02.2020ರಲ್ಲಿ ಸಹಾಯಕ ಆಡಳಿತಾಧಿಕಾರಿ ವೃಂದದಿಂದ ಆಡಳಿತಾಧಿಕಾರಿ ವೃಂದಕ್ಕೆ ದಿನಾಂಕ:30.10.2019 ರಿಂದ ಪೂರ್ವಾನ್ವಯವಾಗಿ ಮುಂಬಡ್ತಿ ನೀಡಿರುವುದರಿಂದ ಜೇಷ್ಠತಾ ಪಟ್ಟಿಯಲ್ಲಿ ಹೆಸರನ್ನು ಸೇರಿಸಬೇಕು. | ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/30/ಡಿಟಿಇ/2020 ದಿನಾಂಕ: 29.02.2020ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಸಹಾಯಕ ಆಡಳಿತಾಧಿಕಾರಿ ವೃಂದದ ಪರಿಷ್ಕೃತ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ. ಸದರಿ ಜೇಷ್ಠತಾ ಪಟ್ಟಿಯನ್ನಾಧರಿಸಿ, ಶ್ರೀ ಬಿ.ಕೆ.ರಾಠೋಡ್, ಸಹಾಯಕ ಆಡಳಿತಾಧಿಕಾರಿ ಇವರಿಗೆ ಆಡಳಿತಾಧಿಕಾರಿ ಹುದ್ದೆಗೆ ದಿನಾಂಕ:30.10.2019 ರಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಮುಂಬಡ್ತಿ ನೀಡಿ ಆದೇಶಿಸಲಾಗಿದೆ.<br><br>ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 116 ಡಿಟಿಇ 2019, ದಿನಾಂಕ:14-05-2020ರಲ್ಲಿ ಪ್ರಕಟಪಡಿಸಲಾಗಿರುವ ಆಡಳಿತಾಧಿಕಾರಿ ವೃಂದದ ಪರಿಷ್ಕೃತ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ:16.05.2019 ರಲ್ಲಿದ್ದಂತೆ ಪ್ರಕಟಿಸಲಾಗಿರುತ್ತದೆ. ಆದಕಾರಣ, ದಿನಾಂಕ:16.05.2019 ರಲ್ಲಿದ್ದಂತೆ ಪ್ರಕಟಪಡಿಸಲಾಗಿರುವ ಆಡಳಿತಾಧಿಕಾರಿ ವೃಂದದ ಜೇಷ್ಠತಾ ಪಟ್ಟಿಯಲ್ಲಿ ಶ್ರೀ ಬಿ.ಕೆ.ರಾಠೋಡ್, ಆಡಳಿತಾಧಿಕಾರಿ(ನಿವೃತ್ತ), ತಾಂತ್ರಿಕ ಶಿಕ್ಷಣ ಇಲಾಖೆ ಇವರ ಹೆಸರನ್ನು ಸೇರ್ಪಡೆಗೊಳಿಸಲು ಅವಕಾಶ ಇರುವುದಿಲ್ಲ |

26/08/2020

(ಎಂ.ಜಿ ವೆಂಕಟೇಶಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)